# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 932 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶರವಣ ಟಿ.ಎ<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ ಸಿರವಾರ ಪಟ್ಟಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವಸತಿ ನಿಲಯವನ್ನು ಯಾವ ಯೋಜನೆಯಡಿಯಲ್ಲಿ ನಿರ್ಮಿಸಲಾಗುತ್ತಿದೆ; ಸದರಿ ಕಾಮಗಾರಿಯ ಅಂದಾಜು ಪ್ರತಿಯನ್ನು ನೀಡುವುದು: | ರಾಯಚೂರು ಜಿಲ್ಲೆ ಸಿರವಾರ ಪಟ್ಟಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಹಯೋಗದೊಂದಿಗೆ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ. ಸದರಿ ಕಾಮಗಾರಿಯ ಅಂದಾಜುಪಟ್ಟಿಯ ಪ್ರತಿಯನ್ನು ಇಲಾಖಾ ವೆಬ್ ಸೈಟ್ https://bcwd.karnataka.gov.in ನಲ್ಲಿ ಒದಗಿಸಿದೆ. |
| ಆ) | ಸದರಿ ಕಾಮಗಾರಿಯನ್ನು ಬೇರೊಂದು ಇಲಾಖೆಯ ಜಾಗದಲ್ಲಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಇಲಾಖೆ/ಮಾಲೀಕರಿಂದ ಅನುಮತಿ ಪಡೆಯಲಾಗಿದೆಯೇ: ಪಡೆದಿದ್ದಲ್ಲಿ, ಅದರ ಪ್ರತಿ ನೀಡುವುದು; ಪಡೆಯದಿದ್ದಲ್ಲಿ, ಅನುಮತಿ ಪಡೆಯದಿರಲು ಕಾರಣಗಳೇನು: | ರಾಯಚೂರು ಜಿಲ್ಲೆ ಸಿರವಾರ ಪಟ್ಟಣದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯವು 1980-81ರಿಂದ ಅಂದರೆ ಸುಮಾರು 45 ವರ್ಷಗಳಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿರುವ ಇಲಾಖೆಯ ಸ್ವಂತ ಕಟ್ಟಡದಲ್ಲಿಯೇ ನಿರ್ವಹಣೆಯಾಗುತ್ತಿತ್ತು. ಸದರಿ ಕಟ್ಟಡವು ಶಿಥಿಲಗೊಂಡಿರುವುದರಿಂದ, ಅದೇ ಹಳೆಯ ಕಟ್ಟಡದ ಸ್ಥಳದ ಆವರಣದಲ್ಲಿಯೇ ಹೊಸದಾಗಿ ಕಟ್ಟಡವನ್ನು ನಿರ್ಮಾಣ ಮಾಡಲಾಗುತ್ತಿದೆ. |
| ಇ) | ಸದರಿ ಕಾಮಗಾರಿಯನ್ನು ವಿರೋಧಿಸಿ ಎಷ್ಟು ದೂರು ಅರ್ಜಿಗಳು ಬಂದಿವೆ; ಸದರಿ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆಯೇ; ಸಾರ್ವಜನಿಕರು ವಿರೋಧದ ನಡುವೆಯು ಕಾಮಗಾರಿಯನ್ನು ಅಲ್ಲಿಯೇ ಮುಂದುವರೆಸಲು ಕಾರಣಗಳೇನು? | ಸದರಿ ಕಾಮಗಾರಿನ್ನು ವಿರೋಧಿಸಿ ಯಾವುದೇ ದೂರು ಅರ್ಜಿಗಳು ಬಂದಿರುವುದಿಲ್ಲ.<br><br>ಸದರಿ ವಿದ್ಯಾರ್ಥಿನಿಲಯದ ಕಟ್ಟಡ ಕಾಮಗಾರಿಯನ್ನು ಸಾರ್ವಜನಿಕರು ಮತ್ತು ಸ್ಥಳೀಯ ಶಾಸಕರ ಸಮ್ಮುಖದಲ್ಲಿಯೇ ಶಂಕುಸ್ಥಾಪನೆ ಜರುಗಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ. |

ಸಂಖ್ಯೆ:ಹಿಂವಕ **644** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು